ಅದಾಸಂ.106/2018 , ಪಿಡಬ್ಲ್ಯು3

ದಿಃ 14.06.2023 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**ಪಾಟೀ ಸವಾಲುಃ ವಾದಿ ಪರ ವಕೀಲರಿಂದಃ**

ಪ್ರತಿವಾದಿಗಳು 1 ರಿಂದ 9 ಮತ್ತು ವಾದಿಗಳು 7-8 ಸ್ವತ್ತುಗಳಲ್ಲಿ ಸ್ವಾಧೀನದಲ್ಲಿ ಇದ್ದಾರೆ. ದಾವಾ ಸ್ವತ್ತಿನ ಚೆಕ್ಕುಬಂದಿ ಹೇಳಲಾಗುವುದಿಲ್ಲ. ಸರ್ವೇ ನಂ. 47/2 ರ ವಿಸ್ತೀರ್ಣ ಮತ್ತು ಚೆಕ್ಕುಬಂದಿ ಹೇಳಲಾಗುವುದಿಲ್ಲ. ಸದರಿ ಸರ್ವೇ ನಂ. ನಲ್ಲಿ ಸ್ವಲ್ಪ ಖಾಲಿ ಜಾಗ ಮತ್ತು 2 ಮನೆಗಳು ಇವೆ. ಮಂಜುನಾಥ ರೆಡ್ಡಿ ಮತ್ತು ಆರ್. ಸೂರ್ಯನಾರಾಯಣ ರೆಡ್ಡಿ ಬಿನ್ ರೆಡ್ಡಿ ವಾರ್ ನರಸಿಂಹರೆಡ್ಡಿ ರವರ ಮನಗಳು ಇವೆ. ಅವರಿಗೆ ಸ್ವತ್ತು ಯಾವ ರೀತಿ ಬಂದಿದೆ ಗೊತ್ತಿಲ್ಲ. ಸದರಿ ಸ್ವತ್ತಿನಲ್ಲಿ ಪಾಯ ಇದೆ ಎಂದರೆ ಸರಿ. ಪಾಯವನ್ನು 12 ನೇ ಪ್ರತಿವಾದಿ ಹೆಂಡತಿ ಹಾಕಿದ್ದಾರೆ ಎಂದರೆ ಗೊತ್ತಿಲ್ಲ.

**2.** ವಾದಿಗಳು ಮತ್ತು 1 ರಿಂದ 9 ನೇಪ್ರತಿವಾದಿಗಳು ಭಾಗ ಮಾಡಿಕೊಂಡಿರುವುದು ನನಗೆ ಗೂತ್ತಿಲ್ಲ. ಈ ವಿಷಯ ನನಗೆ ಗೊತ್ತು ಎಂದರೆ ಸರಿಯಲ್ಲ. ವಾದಿಗಳ ಮಾತು ಕೇಳಿಕೊಂಡು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ವಾದಿ ಮತ್ತು 1 ರಿಂದ 9 ನೇ ಪ್ರತಿವಾದಿಗಳು ದಾವಾ ಸ್ವತ್ತಿನ ಸ್ವಾಧೀನದಲ್ಲಿ ಇಲ್ಲ ಎಂದರೆ ಸರಿಯಲ್ಲ. ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಃಃ ಇಲ್ಲಾ.**

(ಮುಕ್ತ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಗಣಕೀಕರಣಗೊಳಿಸಲಾಯಿತು.)

ಓ ಹೇ ಕೇ ಸ ಇದೆ

ಸಿಜೆ ಮತ್ತು ಜೆಎಂಎಫ್ ಸಿ. ,
ಬಾಗೇಪಲ್ಲಿ